**ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳವರ ನ್ಯಾಯಾಲಯ, ಆಳಂದ**

ಸಿ.ಸಿ.ನಂಃ 15/2022 ಸಿ.ಡಬ್ಲ್ಯೂ –05 ಪಿ.ಡಬ್ಲ್ಯೂ -06

| | | |
|---|---|---|
| ಹೆಸರು | ಃ | ಫರೀದಸಾಬ |
| ತಂದೆ | ಃ | ಅಲೀಸಾಬ |
| ವಯಸ್ಸು | ಃ | 45 ವರ್ಷ |
| ಉದ್ಯೋಗ | : | ಕೂಲಿಕೆಲಸ |
| ವಾಸಸ್ಥಳ | ಃ | ರುದ್ರವಾಡಿ |

ದಿನಾಂಕಃ 26.09.2025

ಸತ್ಯ ಪ್ರತಿಜ್ಞೆಯ ಮೇರೆ ಗೆ

---

**ಮುಖ್ಯ ವಿಚಾರಣೆ ಮಾನ್ಯ ಸಸಅ ಅವರಿಂದ**

ಆರೋಪಿಯ ಪರಿಚಯ ಇರುತ್ತದೆ. ಚಾಸಾ-1 ರಿಂದ 4 ಮತ್ತು 6 ರಿಂದ 10 ರವರ ಪರಿಚಯ ಇರುತ್ತದೆ. ಈ ಪ್ರಕರಣದ ಬಗ್ಗೆ ನನಗೆ ಯಾವುದೇ ಮಾಹಿತಿ ಇರುವುದಿಲ್ಲ. ನನ್ನ ಸಮಕ್ಷಮ ಯಾವುದೇ ಪಂಚನಾಮೆ ಜರುಗಿಸಿರುವುದಿಲ್ಲ, ಯಾವುದೇ ಮುದ್ದೇ ಮಾಲುಗಳನ್ನು ಜಪ್ತಿಪಡಿಸಿಕೊಂಡಿರುವುದಿಲ್ಲ. ಪೋಲಿಸರು ಒಂದು ದಾಖಲೆಯ ಮೇಲೆ ಸಹಿ ಮಾಡು ಅಂತಾ ಹೇಳಿದ ಕಾರಣ ಸಹಿ ಮಾಡಿರುತ್ತೇನೆ. ಸಾಕ್ಷಿ ನಿಪಿ. ೧ ರಲ್ಲಿ ಇರುವ ತನ್ನ ಸಹಿಯನ್ನು ನೋಡಿ ಗುರುತಿಸಿದ್ದು ಅದನ್ನು ನಿಪಿ. ೧-ಬಿ ಅಂತಾ ಗುರುತಿಸಲಾಯಿತು.

(ಈ ಹಂತದಲ್ಲಿ ಮಾನ್ಯ ಅಭಿಯೋಜಕರು ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯನ್ನಾಗಿ ಪರಿಗಣಿಸಿ ಪಾಟೀ ಸವಾಲು ಮಾಡಲು ಅನುಮತಿಯನ್ನು ಕೋರಿರುತ್ತಾರೆ. ಅನುಮತಿಸಲಾಯಿತು)

**ಪಾಟೀ ಸವಾಲು ಃ ಸ.ಸ.ಅ. ವಕೀಲರಿಂದ.**

ದಿಃ 27-10-2021 ರಂದು ಮ. 2.30 ರಿಂದ 3.30 ರವರೆಗೆ ನನ್ನ ಹಾಗೂ ಚಾಸಾ 4 ರವರ ಸಮಕ್ಷಮ ಪಂಚನಾಮೆ ಜರುಗಿಸಿ ಸ್ಥಳದಿಂದ ಒಂದು ಟ್ಯಾಕ್ಟರನ್ನು ಜಪ್ತಿಪಡಿಸಿಕೊಂಡಿರುತ್ತಾರೆ ಎಂದರೆ ಸರಿ ಅಲ್ಲ. ನನ್ನ ಸಮಕ್ಷಮ ಪಂಚನಾಮೆ ಮಾಡಿದರೂ ಸಹಿತ ಆರೋಪಿಗೆ ಸಹಾಯ ಮಾಡಲು ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂಧರೆ ಸರಿ ಅಲ್ಲ.

**ಪಾಟೀ ಸವಾಲು ಆರೋಪಿತರ ಪರಃ ವಕೀಲರಿಂದಃ**

ಆರೋಪಿತರ ಪರ ವಕೀಲರು ಪಾಟೀ ಸವಾಲು ಇಲ್ಲ ಎಂದು ಹೇಳಿದ್ದರಿಂದ ಇಲ್ಲ ಎಂದು ತೆಗೆದುಕೊಳ್ಳಲಾಯಿತು.

**ಮರುವಿಚಾರಣೆಃ- ಇರುವುದಿಲ್ಲ.**

ಓ.ಹೇ.ಕೇ.ಸರಿ ಇದೆ.

ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು

ಜೆ.ಎಂ.ಎಫ್.ಸಿ.ಆಳಂದ